# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 21 ಸೇಇವಿ 2019

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ
ಬೆಂಗಳೂರು, ದಿನಾಂಕ: 03.10.2019.

## ಸುತ್ತೋಲೆ

**ವಿಷಯ:** ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧದ ಅನಾಮಧೇಯ (anonymous) ದೂರುಗಳ ಬಗ್ಗೆ ಕ್ರಮ.

**ಉಲ್ಲೇಖ:** 1. ಸುತ್ತೋಲೆ ಸಂಖ್ಯೆ: ಜಿಎಡಿ 113 ಒಒಎಂ 62, ದಿನಾಂಕ: 26.10.1962.

2. ಭಾರತ ಸರ್ಕಾರದ ಡಿ.ಓ.ಪಿ.ಟಿ ಅಧಿಕೃತ ಜ್ಞಾಪನ ಸಂಖ್ಯೆ:104/76/2011-AVD.1, ದಿನಾಂಕ:18.10.2013

****

1. ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧ ಸ್ವೀಕೃತವಾಗುವ ಅನಾಮಧೇಯ ದೂರುಗಳ ಬಗ್ಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಉಲ್ಲೇಖಿತ ಸುತ್ತೋಲೆಯಲ್ಲಿ ಕೆಲವು ಸೂಚನೆಗಳನ್ನು ನೀಡಲಾಗಿದೆ. ಇಂತಹ ದೂರುಗಳು ಕೆಲವು ಸಂದರ್ಭಗಳಲ್ಲಿ ವೈಯಕ್ತಿಕ ದ್ವೇಷ, ಅಸೂಯೆ ಅಥವಾ ಪೂರ್ವಗ್ರಹ ಪೀಡಿತವಾಗಿರುತ್ತವೆ. ಅಲ್ಲದೇ, ದೂರುಗಳಿಗೆ ಪೂರಕವಾದ ಮಾಹಿತಿ/ದಾಖಲೆಗಳನ್ನು ಸಾಮಾನ್ಯವಾಗಿ ಲಭ್ಯಪಡಿಸಿರುವುದಿಲ್ಲ. ಇಂತಹ ದೂರುಗಳಿಂದಾಗಿ ಸರ್ಕಾರಿ ಅಧಿಕಾರಿ/ನೌಕರರ ದೈನಂದಿನ ಕೆಲಸ ಕಾರ್ಯಗಳಲ್ಲಿ ಹಸ್ತಕ್ಷೇಪ ಉಂಟಾಗುವುದಲ್ಲದೇ ದಕ್ಷ ಹಾಗೂ ಪ್ರಮಾಣಿಕ ನೌಕರರ ವಿಶ್ವಾಸರ್ಹತೆಗೆ, ಧಕ್ಕೆ ಉಂಟಾಗುತ್ತದೆ ಹಾಗೂ ಅವರು ಮುಕ್ತ ಮತ್ತು ನಿರ್ಭೀತರಾಗಿ ಕೆಲಸ ನಿರ್ವಹಿಸಲು ಸಾಧ್ಯವಾಗುತ್ತಿಲ್ಲ.

2. ಮಾನ್ಯ ಮುಖ್ಯಮಂತ್ರಿಯವರು ದಿನಾಂಕ: 04.08.2019ರ ಟಿಪ್ಪಣಿಯಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘವು ಈ ಸಂಬಂಧ ನೀಡಿರುವ ಮನವಿಯನ್ನು ಪರಿಗಣಿಸಿ, ಕೇಂದ್ರ ಸರ್ಕಾರದ ಮಾದರಿಯಂತೆಯೇ ರಾಜ್ಯದಲ್ಲಿ ಸರ್ಕಾರಿ ನೌಕರರ ವಿರುದ್ಧ ಅನಾಮಧೇಯ ದೂರು/ಪತ್ರಗಳ ಆಧಾರದ ಮೇಲೆ ತನಿಖೆಗೆ ಒಳಪಡಿಸದೆ, ಪೂರ್ಣ ವಿಳಾಸ ಸಹಿತವಿರುವ ದೂರುಗಳನ್ನು ಮಾತ್ರ ತನಿಖೆಗೆ ಪರಿಗಣಿಸಲು ಆದೇಶ ಹೊರಡಿಸುವಂತೆ ಸೂಚಿಸಿರುತ್ತಾರೆ.

...2

Scanned by CamScanner

3. ಮೇಲ್ಕಾಣಿಸಿದ ಅಂಶಗಳ ಹಾಗೂ ಭಾರತ ಸರ್ಕಾರದ ಉಲ್ಲೇಖ-2ರ ಅಧಿಕೃತ ಜ್ಞಾಪನದ ಹಿನ್ನಲೆಯಲ್ಲಿ ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧ ಸ್ವೀಕೃತವಾಗುವ ಅನಾಮಧೇಯ ಅರ್ಜಿಗಳ ಆಧಾರದ ಮೇಲೆ ಪ್ರಕರಣವನ್ನು ತನಿಖೆಗೆ/ವಿಚಾರಣೆಗೆ ಒಳಪಡಿಸದೇ ಅಂತಹ ದೂರು ಅರ್ಜಿಗಳನ್ನು ಕಡತಗೊಳಿಸಬೇಕೆಂದು ಸೂಚಿಸಿದೆ.

4. ಪೂರ್ಣ ವಿಳಾಸ ಸಹಿತವಿರುವ ದೂರುಗಳನ್ನು ಮಾತ್ರ ತನಿಖೆಗೆ/ವಿಚಾರಣೆಗೆ ಪರಿಗಣಿಸಲು ಸಚಿವಾಲಯದ ಎಲ್ಲಾ ಕಾರ್ಯದರ್ಶಿಗಳಿಗೆ ಹಾಗೂ ಇಲಾಖಾ ಮುಖ್ಯಸ್ಥರಿಗೆ ಸೂಚಿಸಲಾಗಿದೆ. ಈ ಅಂಶವನ್ನು ಸಂಬಂಧಪಟ್ಟ ಇಲಾಖೆಗಳು ತಮ್ಮ ಅಧೀನ ಕಛೇರಿಗಳಿಗೆ ತಿಳಿಸಲು ಅಗತ್ಯ ಕ್ರಮವಹಿಸುವಂತೆ ಸೂಚಿಸಲಾಗಿದೆ.

ತಮವಿಜಯಭಾಸ್ಕರ

**(ತ.ಮ. ವಿಜಯ ಭಾಸ್ಕರ್)**
ಸರ್ಕಾರದ ಮುಖ್ಯ ಕಾರ್ಯದರ್ಶಿ

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು
2. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ.
3. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110011.
4. ಎಲ್ಲಾ ಇಲಾಖಾ ಮುಖ್ಯಸ್ಥರು.
5. ಎಲ್ಲಾ ಪ್ರಾದೇಶಿಕ ಆಯುಕ್ತರು.
6. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
7. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
8. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು
9. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

Scanned by CamScanner